ಅ) ರಾಜ್ಯದಲ್ಲಿರುವ ಸಾರ್ವಜನಿಕ ಗ್ರಂಥಾಲಯಗಳ ಸಂಖ್ಯೆ ಎಷ್ಟು?

ಆ) ಗ್ರಾಮಾಂತರ ಪ್ರದೇಶಗಳಲ್ಲಿ ಗ್ರಂಥಾಲಯಗಳ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಇದನ್ನು ಅನುಷ್ಠಾನಕ್ಕೆ ತರಲಾಗಿದೆಯೇ?

ಶ್ರೀ ಆರ್. ಕೃಷ್ಣಪ್ಪ (ವಯಸ್ಕರ ಶಿಕ್ಷಣ ಮತ್ತು ಗ್ರಂಥಾಲಯ ರಾಜ್ಯ ಸಚಿವರು) :

ಅ) 1700

ಆ) ಹೌದು

ಇ) ಗ್ರಾಮಾಂತರ ಪ್ರದೇಶಗಳಲ್ಲಿ ಗ್ರಂಥಾಲಯಗಳನ್ನು ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಸರ್ಕಾರಿ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯ ಕೊರತೆ

2191 - ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಕುಂದಾಪುರ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯಗಳ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಇದನ್ನು ಸರಿಪಡಿಸಲು ಎಷ್ಟು ಕಾರ್ಯಕ್ರಮ ಹಾಕಿಕೊಳ್ಳಲಾಗಿದೆ.

ಶ್ರೀ ಹೆಚ್. ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು

ಆ) ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ನೀರು ಮತ್ತು ಶೌಚಾಲಯಗಳನ್ನು ಒದಗಿಸಲು ರಾಜ್ಯ ವಲಯ ಯೋಜನೆಯಡಿಯಲ್ಲಿ ಒದಗಿಸಿರುವ ಹಣದ ವಿವರ:

(ರೂ. ಲಕ್ಷಗಳಲ್ಲಿ)

ವರ್ಷ	ಪ್ರಾಥಮಿಕ ಶಾಲೆಗಳಿಗೆ	ಪ್ರೌಢ ಶಾಲೆಗಳಿಗೆ
1995-96	200.00	100.00
1996-97	50.00	150.00
1997-98	100.00	60.00